ಆ) ರಾಜ್ಯದ ನ್ಯಾಯಾಧೀಶರುಗಳ ನೇಮಕಾತಿಯನ್ನು ಕೇಂದ್ರ ಸರ್ಕಾರ ಮಾಡಬೇಕಾಗಿರುವುದರಿಂದ ಈ ಬಗ್ಗೆ ಕೇಂದ್ರ ಸರ್ಕಾರದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಬೆಳಗಾವಿಯಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ.

70 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರು ಬಿಟ್ಟು ಬೇರೆ ಕಡೆಗೆ ಅಂದರೆ ಉತ್ತರ ಕರ್ನಾಟಕದಲ್ಲಿ ಹೈಕೋರ್ಟ್ ಪೀಠವನ್ನು ಸ್ಥಾಪಿಸಲು ಜನರ ಬೇಡಿಕೆ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಉತ್ತರ ಕರ್ನಾಟಕದಲ್ಲಿ ಒಂದು ಹೈಕೋರ್ಟ್ ಪೀಠವನ್ನು ಸ್ಥಾಪಿಸಲು ಸರ್ಕಾರದವರು ತತ್ವಶಃ ಒಪ್ಪಿಕೊಂಡಿರುವರೇ ?

ಇ) ಉತ್ತರ ಕರ್ನಾಟಕದಲ್ಲಿ ಹೈಕೋರ್ಟ್ ಪೀಠವನ್ನು ಸ್ಥಾಪಿಸಲು ಕೇಂದ್ರ ಸರ್ಕಾರದವರು ತತ್ವಶಃ ಒಪ್ಪಿಗೆ ನೀಡಿರುವುದೆ ?

ಈ) ಹೈಕೋರ್ಟಿನವರು ಬೆಂಗಳೂರು ಬಿಟ್ಟು ಬೇರೆ ಕಡೆಗೆ ಅಂದರೆ ಉತ್ತರ ಕರ್ನಾಟಕದ ಒಂದು ಸ್ಥಳದಲ್ಲಿ ಹೈಕೋರ್ಟ್ ಪೀಠವನ್ನು ಸ್ಥಾಪಿಸಲು ಒಪ್ಪಿಕೊಂಡಿರುವರೆ ಇಲ್ಲದಿದ್ದಲ್ಲಿ ಕಾರಣವೇನು ?

ಉ) ಉತ್ತರ ಕರ್ನಾಟಕದ ಮುಖ್ಯ ಸ್ಥಳವಾದ ಬೆಳಗಾವಿಯಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸಲು ಅಲ್ಲಿಯ ಜನರ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಊ) ಹಾಗಿದ್ದಲ್ಲಿ ಬೆಳಗಾವಿಯಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಬಂದಿದೆ.

ಆ) ಕೇಂದ್ರ ಸರ್ಕಾರವು ಈ ವಿಷಯದಲ್ಲಿ ಉಚ್ಚ ನ್ಯಾಯಾಲಯದ ಅಭಿಪ್ರಾಯ ಮತ್ತು ರಾಜ್ಯಪಾಲರ ಒಪ್ಪಿಗೆಯೊಂದಿಗೆ ಪ್ರಸ್ತಾವನೆಯನ್ನು ಕಳುಹಿಸುವಂತೆ ರಾಜ್ಯ ಸರ್ಕಾರವನ್ನು ಕೋರಿದ್ದಾರೆ.

ಇ) ಪತ್ರ ವ್ಯವಹಾರ ನಡೆಯುತ್ತಿದೆ.

ಉ) ಬಂದಿದೆ.

ಊ) ಉಚ್ಚ ನ್ಯಾಯಾಲಯದ ಪೀಠವನ್ನು ಅದರ ಕೇಂದ್ರ ಸ್ಥಾನದಿಂದ ಹೊರಗೆ ಸ್ಥಾಪಿಸುವ ಬಗೆಗಿನ ಪ್ರಸ್ತಾವನೆಗೆ ಉಚ್ಚ ನ್ಯಾಯಾಲಯದ ಒಪ್ಪಿಗೆ ಪಡೆಯಬೇಕಾಗಿದ್ದು ಅದರಂತೆ ಉಚ್ಚ ನ್ಯಾಯಾಲಯದ ಒಪ್ಪಿಗೆಯನ್ನು ಕೋರಲಾಗಿತ್ತು. ಆದರೆ, ಈ ಪ್ರಸ್ತಾವನೆಗೆ ಉಚ್ಚ ನ್ಯಾಯಾಲಯವು ಒಪ್ಪಿಗೆ ನೀಡಿಲ್ಲ. ಈ ಬಗ್ಗೆ ಪತ್ರ ವ್ಯವಹಾರ ಮುಂದುವರೆದಿದೆ.

ಹಾವೇರಿ ನಗರಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆ.

73-ಶ್ರೀ ಪಿ.ಸಿ. ಸಿದ್ದನಗೌಡರು (ಕಲಘಟಗಿ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

*ಅ) ಹಾವನೂರು ಗ್ರಾಮದ ಸಮೀಪ ತುಂಗಭದ್ರಾ ನದಿಯಿಂದ ಅಥವಾ ದೇವಗಿರಿಯ ಹತ್ತಿರದ ವರದಾ ನದಿಯಿಂದ ಯೋಜನೆ ತಯಾರಿಸಿ ಹಾವೇರಿ